# ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 100 ಇಎನ್‌ಕ್ಯೂ 2017, ದಿನಾಂಕ:07.7.2018 ರಲ್ಲಿ ವಿಧಿಸಲಾದ ದಂಡನೆ, ಶ್ರೀಮತಿ ಚಿತ್ರಲೇಖಾ ಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್ ಇವರು ಸಲ್ಲಿಸಿರುವ ಪುನರ್ ಪರಿಶೀಲನಾ ಅರ್ಜಿಯ ಕುರಿತು ಆದೇಶ.

*ಓದಲಾಗಿದೆ:*

*1.* ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 100 ಇಎನ್‌ಕ್ಯೂ 2017, ದಿನಾಂಕ:07.7.2018.

*2* ಶ್ರೀಮತಿ ಚಿತ್ರಲೇಖಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್ ಇವರ ಪುನರ್ ಪರಿಶೀಲನಾ ಅರ್ಜಿ ದಿನಾಂಕ:23.8.2018.

*ಪ್ರಸ್ತಾವನೆ:-*

ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನಲ್ಲಿ ಕೈಗೊಳ್ಳಲಾಗಿದ್ದ ಕಾಮಗಾರಿಗಳಾದ (1) ಸಾರ್ವಜನಿಕ ಕೃಷಿ ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿ, (2) ಫೋರ್ಟ್ ಎರಿಯಾದಲ್ಲಿ ಸಾರ್ವಜನಿಕ ಗ್ರಂಥಾಲಯ ಕಟ್ಟಡ ಕಾಮಗಾರಿ, (3) ಎನ್.ಜಿ.ಓ ಕಾಲೋನಿಯಲ್ಲಿ ಸಾರ್ವಜನಿಕ ಗ್ರಂಥಾಲಯ ನಿರ್ಮಾಣ ಕಾಮಗಾರಿ ಮತ್ತು (4) ಸೋಮಲಾಪುರದ ಗ್ರಾಮದಲ್ಲಿ ಈಶ್ವರ ಸಾರ್ವಜನಿಕ ಗ್ರಂಥಾಲಯ ಕಾಮಗಾರಿಗಳ ಅನುಷ್ಠಾನದಲ್ಲಿ ತೀವ್ರತರದ ಕರ್ತವ್ಯ ಲೋಪ ಹಾಗೂ ಹಣ ದುರುಪಯೋಗವಾಗಿರುವ ಆರೋಪಗಳ ಕುರಿತು ಮಾನ್ಯ ಉಪಲೋಕಾಯುಕ್ತರು ವಿಚಾರಣೆ ನಡೆಸಿ ಸಲ್ಲಿಸಿದ್ದ ವಿಚಾರಣಾ ವರದಿಯನ್ನು ಪರಿಶೀಲಿಸಿ, ಶ್ರೀಮತಿ ಚಿತ್ರಲೇಖಾ ಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ ಸಿಂಧನೂರು ಮತ್ತು ಎ.ಎಂ.ಮೊಗಾರೆ, ಕಿರಿಯ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ಸಿಂಧನೂರು ಇವರುಗಳ ವಿರುದ್ಧ ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 8(ivಎ) ರ ಅನುಸಾರ ಕಾಲಿಕ ವೇತನ ಶ್ರೇಣಿಯಲ್ಲಿ 2 ಹಂತವನ್ನು ಸಂಚಿತ ಪರಿಣಾಮ ಸಹಿತವಾಗಿ ಕೆಳಗಿಳಿಸುವ ದಂಡನೆ ವಿಧಿಸಿ, ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:07.7.2018 ರ ಆದೇಶದಲ್ಲಿ ಅದೇಶಿಸಲಾಗಿದೆ.

ಶ್ರೀಮತಿ ಚಿತ್ರಲೇಖಾ ಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್ ಇವರು ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:23.8.2018 ರಂದು ಸಲ್ಲಿಸಿರುವ ಪುನರ್ ಪರಿಶೀಲನಾ ಅರ್ಜಿಯಲ್ಲಿ ಪ್ರಶ್ನಿತ ಕಟ್ಟಡವಾದ ಪೋರ್ಟ್ ಏರಿಯಾದಲ್ಲಿನ ಸಾರ್ವಜನಿಕ ಗ್ರಂಥಾಲಯ ಕಟ್ಟಡಕ್ಕೆ ಸಂಬಂಧಿಸಿದಂತೆ ಗ್ರೌಂಡ್ ಪ್ಲೋರ್ ಕಟ್ಟಡವನ್ನು ಕರ್ನಾಟಕ ಭೂ ಸೇನಾ ನಿಗಮದವರಿಂದ ನಿರ್ಮಿಸಲ್ಪಟ್ಟಿದ್ದು ಅಪೂರ್ಣಗೊಂಡ ಕಾಮಗಾರಿಯನ್ನು ಅಂದಿನ ಶಾಸಕರ ಕೋರಿಕೆಯನುಸಾರ ರೂ.3.50 ಲಕ್ಷ ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆಯೆಂದು, ಕಾಮಗಾರಿಯನ್ನು ಮಂಜೂರಾದ ಅಂದಾಜು ಪಟ್ಟಿಯನುಸಾರ ಅನುಷ್ಠಾನಗೊಳಿಸಿದ್ದು ಯಾವುದೇ ಹಣ ದುರುಪಯೋಗವಾಗಿರುವುದಿಲ್ಲವೆಂದು ಸದರಿ ಕಟ್ಟಡವನ್ನು ಸಕ್ಷಮ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗಿದ್ದು, ಈಗಲೂ ಕಟ್ಟಡ ಸುಸ್ಥಿತಿಯಲ್ಲಿರುತ್ತದೆಯೆಂದು ಕಾಮಗಾರಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಸರ್ಕಾರಕ್ಕೆ ಮತ್ತು ಲೋಕಾಯುಕ್ತ ಕಛೇರಿಗೆ ಸಲ್ಲಿಸಲಾಗಿದ್ದು, ದಿನಾಂಕ:7.7.2018 ರ ಆದೇಶವನ್ನು ಕ.ನಾ.ಸೇ (ವ.ನಿ.ಮೇ) ನಿಯಮಗಳ ನಿಯಮ 26 ರಡಿ ಪುನರ್ ಪರಿಶೀಲಿಸಿ ನ್ಯಾಯ ದೊರಕಿಸಿಕೊಡುವಂತೆ ಕೋರಿರುತ್ತಾರೆ.

ಶ್ರೀಮತಿ ಚಿತ್ರಲೇಖಾ ಪಾಟೀಲ್ ಇವರು ಸಲ್ಲಿಸಿರುವ ಪುನರ್ ಪರಿಶೀಲನಾ ಅರ್ಜಿಯನ್ನು ಪರಿಶೀಲಿಸಲಾಯಿತು. ಶ್ರೀಯುತರ ಪುನರ್ ಪರಿಶೀಲನಾ ಅರ್ಜಿಯಲ್ಲಿ ಹಿಂದಿನ ಶಾಸಕರ ಕೋರಿಕೆಯನುಸಾರ ಕರ್ನಾಟಕ ಭೂ ಸೇನಾ ನಿಗಮದವರಿಂದ ನಿರ್ಮಿಸಲ್ಪಟ್ಟಿದ್ದ ಕಟ್ಟಡದ ಮೇಲೆ ಸಾರ್ವಜನಿಕ ಗ್ರಂಥಾಲಯವನ್ನು ನಿರ್ಮಿಸಲು ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಟ್ಟಡವನ್ನು ಅನುಷ್ಠಾನಗೊಳಿಸಲಾಗಿದೆಯೆಂದು ತಿಳಿಸಿರುತ್ತಾರೆ. ಹಿಂದಿನ ಮಾನ್ಯ ಶಾಸಕರು ಪ್ರಶ್ನಿತ ಕಟ್ಟಡದ ಅನುಷ್ಠಾನಗೊಳಿಸುವ ಬಗ್ಗೆ ಕೋರಿಕೆ ಸಲ್ಲಿಸಿದ್ದ ಬಗ್ಗೆ ಯಾವುದೇ ದಾಖಲೆಯನ್ನು

---2

ಸಲ್ಲಿಸಿರುವುದಿಲ್ಲ. ಪ್ರಸ್ತುತ ಸದರಿಯವರು ನೀಡಿರುವ ವಿವರಣೆಯನ್ನು ದಂಡನೆ ವಿಧಿಸುವ ಪೂರ್ವದಲ್ಲಿಯೇ ಪರಿಶೀಲಿಸಿ ಅಂತಿಮ ಆದೇಶ ಹೊರಡಿಸಿರುವುದರಿಂದ ಹಾಗೂ ಶ್ರೀಯುತರ ವಿವರಣೆಯಲ್ಲಿ ಈ ಹಿಂದೆ ಆರೋಪ ಸಾಭೀತಾಗಿರುತ್ತದೆ ಎಂದು ನಿರ್ಣಯಿಸಿರುವುದರ ಸ್ವರೂಪವನ್ನು ಬದಲಾಯಿಸುವಂತಹ ಯಾವುದೇ ಅಂಶಗಳು/ ದಾಖಲೆಗಳನ್ನು ಸಲ್ಲಿಸದೆ ಇರುವುದರಿಂದ ದಿನಾಂಕ:7.7.2018 ರ ದಂಡನಾದೇಶವನ್ನು ಪುನರ್ ಪರಿಶೀಲಿಸಲು ಅಗತ್ಯ ಕಂಡು ಬಂದಿರುವುದಿಲ್ಲ. ಆದ್ದರಿಂದ, ಶ್ರೀಮತಿ ಚಿತ್ರಲೇಖಾ ಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್ ಇವರ ಪುನರ್ ಪರಿಶೀಲನಾ ಅರ್ಜಿಯನ್ನು ತಿರಸ್ಕರಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

## ಆದೇಶ ಸಂಖ್ಯೆ: ಗ್ರಾಅಪ 100 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:01.12.2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀಮತಿ ಚಿತ್ರಲೇಖಾ ಪಾಟೀಲ್, ಹಿಂದಿನ ಸಹಾಯಕ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ ಸಿಂಧನೂರು ಇವರು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 100 ಇಎನ್‌ಕ್ಯೂ 2017, ದಿನಾಂಕ:07.7.2018 ರಲ್ಲಿ ತಮಗೆ ವಿಧಿಸಲಾದ ದಂಡನೆಯನ್ನು ಪುನರ್ ಪರಿಶೀಲಿಸುವಂತೆ ದಿನಾಂಕ:23.8.2018 ರಂದು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 26 ರಡಿ ಸಲ್ಲಿಸಿದ್ದ ಪುನರ್ ಪರಿಶೀಲನಾ ಅರ್ಜಿಯಲ್ಲಿ ಈ ಹಿಂದೆ ನಿರ್ಣಯಿಸಲಾದ ಅಂಶಗಳ ಸ್ವರೂಪಗಳನ್ನು ಬದಲಿಸುವಂತಹ ಯಾವುದೇ ಸಮರ್ಥನೀಯ ಅಂಶಗಳು/ದಾಖಲೆಗಳನ್ನು ಒದಗಿಸದೇ ಇರುವುದರಿಂದ ಸದರಿಯವರ ಅರ್ಜಿಯು ಪರಿಗಣನಾರ್ಹವಾಗಿರುವುದಿಲ್ಲವೆಂಬ ನಿರ್ಣಯದೊಂದಿಗೆ ಸದರಿ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

01/12/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು–ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪತ್ರ 1&2)/ (ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ವೃತ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು
5. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, (ಸೇವೆಗಳು–ಎ ಮತ್ತು ಸೇವೆಗಳು–ಸಿ ಶಾಖೆ)
6. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಮುಖಾಂತರ)
7. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
9. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.